ಕರ್ನಾಟಕ ಸರ್ಕಾರ

**ನಿರ್ದೇಶಕರ ಕಛೇರಿ, ಪ್ರಧಾನ ಮಂತ್ರಿ ಪೋಷಣ್ ಶಕ್ತಿ ನಿರ್ಮಾಣ್ (ಮಧ್ಯಾಹ್ನ ಉಪಾಹಾರ ಯೋಜನೆ)**

**ಶಾಲಾ ಶಿಕ್ಷಣ ಇಲಾಖೆ,ನೃಪತುಂಗ ರಸ್ತೆ, ಕೆ.ಆರ್.ವೃತ್ತ, ಬೆಂಗಳೂರು-560001.**

ಸಂಖ್ಯೆ:ಎ೦1/ಪಿ.ಎಂ.ಪೋ/ಪೂ.ಪೌ.ಆ.ಕಾ/2023-24 ದಿನಾಂಕ:20.06.2023

## ಸುತ್ತೋಲೆ

ವಿಷಯ: 2023-24 ನೇ ಸಾಲಿಗೆ ಶಾಲಾ ಮಕ್ಕಳ ಅಪೌಷ್ಟಿಕತೆ ನಿವಾರಣೆಗಾಗಿ ರಾಜ್ಯದ ಎಲ್ಲಾ ಜಿಲ್ಲೆಗಳ ಸರ್ಕಾರಿ ಮತ್ತು ಅನುದಾನಿತ ಶಾಲೆಗಳ 1-8ನೇ ತರಗತಿ ಮಕ್ಕಳಿಗೆ ಪೂರಕ ಪೌಷ್ಟಿಕ ಆಹಾರವಾಗಿ ಬೇಯಿಸಿದ ಮೊಟ್ಟೆ (ಮೊಟ್ಟೆ ಸ್ವೀಕರಿಸದ ಮಕ್ಕಳಿಗೆ ಬಾಳೆ ಹಣ್ಣು ಅಥವಾ ಶೇಂಗಾ ಚಿಕ್ಕಿ) ವಿತರಿಸುವಂತೆ ಸೂಚಿಸುವ ಬಗ್ಗೆ.

ಉಲ್ಲೇಖ: 1.ಈ ಕಛೇರಿಯ ಸುತ್ತೋಲೆ ಪತ್ರ ಸಂ:ಎ೦1/ಮ.ಉ.ಯೋ/ಫ್ಲೆಕ್ಸಿ ಫಂಡ್/E-FILE-751175/2022, ದಿನಾಂಕ:20.05.2023

2.ಈ ಕಛೇರಿಯ ಸುತ್ತೋಲೆ ಪತ್ರ ಸಂ:ಎ೦1/ಮ.ಉ.ಯೋ/ಪೂ.ಪೌ.ಆ.ಕಾ/E-FILE-785371/2022, ದಿನಾಂಕ:21.07.2022

3. PAB MINUTES - 2023-24 No. F.No.6-2/2023-Desk(PMP) Government of India, Ministry of Education, Department of School Education & Literacy, PM-POSHAN, New Delhi. Dated:18.05.2023

ಮೇಲ್ಕಂಡ ವಿಷಯ ಹಾಗೂ ಉಲ್ಲೇಖಗಳಿಗೆ ಸಂಬಂಧಿಸಿದಂತೆ 2023-24 ನೇ ಸಾಲಿನಲ್ಲಿ ರಾಜ್ಯದಲ್ಲಿ ಎಲ್ಲಾ ಜಿಲ್ಲೆಗಳ ಸರ್ಕಾರಿ ಮತ್ತು ಅನುದಾನಿತ ಪ್ರಾಥಮಿಕ ಮತ್ತು ಪ್ರೌಢಶಾಲೆಗಳ 1-8 ನೇ ತರಗತಿ ಮಕ್ಕಳಿಗೆ ಅಪೌಷ್ಟಿಕತೆ ಮತ್ತು ಅನಿಮಿಯ ನಿವಾರಣೆಗಾಗಿ ಪೂರಕ ಪೌಷ್ಟಿಕ ಆಹಾರವಾಗಿ ಬೇಯಿಸಿದ ಮೊಟ್ಟೆ (ಮೊಟ್ಟೆ ಸ್ವೀಕರಿಸದ ಮಕ್ಕಳಿಗೆ ಬಾಳೆ ಹಣ್ಣು ಅಥವಾ ಶೇಂಗಾ ಚಿಕ್ಕಿ) ಮಧ್ಯಾಹ್ನದ ಬಿಸಿಯೂಟದೊಂದಿಗೆ ಒಬ್ಬ ವಿದ್ಯಾರ್ಥಿಗೆ ವಾರದಲ್ಲಿ ಒಂದು ಮೊಟ್ಟೆಯಂತೆ ಮೊದಲ ಹಂತದಲ್ಲಿ **ದಿನಾಂಕ:20.06.2023 ರಿಂದ ಪ್ರಾರಂಭಿಸಿ ದಿನಾಂಕ:15.07.2023 ರವರೆಗೆ ಸರ್ಕಾರದ ಮುಂದಿನ ಆದೇಶ ಬರುವವರೆಗೂ** ಫಲಾನುಭವಿ ಮಕ್ಕಳ ಹಾಜರಾತಿಗೆ ಅನುಗುಣವಾಗಿ ವಿತರಿಸುವಂತೆ ಈ ಮೂಲಕ ಸೂಚಿಸಿದೆ.ಈ ಸಂಬಂಧ ಪ್ರತಿ ವಿದ್ಯಾರ್ಥಿಗೆ ಒಂದು ದಿನಕ್ಕೆ ಒಂದು ಮೊಟ್ಟೆ/ ಬಾಳೆಹಣ್ಣು/ಶೇಂಗಾ ಚಿಕ್ಕಿಯ **ಘಟಕ ವೆಚ್ಚ ರೂ. 6** (ರೂ.ಆರು) ರಂತೆ ನಿಗದಿಪಡಿಸಿರುತ್ತದೆ. ಇದರಂತೆ ವೆಚ್ಚ ಭರಿಸಲು ಸುಚಿಸಿದೆ.

ರಾಜ್ಯದ ಕಲ್ಯಾಣ ಕರ್ನಾಟಕ ವಿಭಾಗದ 08 ಜಿಲ್ಲೆಗಳಾದ ಯಾದಗಿರಿ, ಕಲಬುರಗಿ, ಬಳ್ಳಾರಿ, ವಿಜಯನಗರ, ಕೊಪ್ಪಳ, ರಾಯಚೂರು, ಬೀದರ್, ವಿಜಯಪುರ ಈ ಜಿಲ್ಲೆಗಳಲ್ಲಿ 2023-24ನೇ ಸಾಲಿನ ಪಿ.ಎ.ಬಿ ಅನುಮೋದನೆ ಮತ್ತು ಅನುದಾನ ಹಂಚಿಕೆಯಂತೆ ಕೇಂದ್ರ ಮತ್ತು ರಾಜ್ಯದ ಪಾಲಿನ ಫ್ಲೆಕ್ಸಿ ಅನುದಾನದಡಿ ಸರ್ಕಾರಿ ಮತ್ತು ಅನುದಾನಿತ ಶಾಲೆಗಳ 1-8ನೇ ತರಗತಿಯ ಫಲಾನುಭವಿ ಮಕ್ಕಳಿಗೆ ಸದರಿ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸುವಂತೆ ಸೂಚಿಸಿದೆ. ಈ ಹಿಂದಿನ ಸಾಲಿನ ಉಲ್ಲೇಖ-2 ರಲ್ಲಿನ ಮಾರ್ಗಸೂಚಿಯಂತೆ ಅಗತ್ಯ ಕ್ರಮಗಳನ್ನು ಕೈಗೊಂಡು ಫಲಾನುಭವಿ ವಿದ್ಯಾರ್ಥಿಗಳಿಗೆ

ಎಸ್.ಡಿ.ಎಂ.ಸಿ ನೇತೃತ್ವದಲ್ಲಿ ಪೂರಕ ಪೌಷ್ಟಿಕ ಆಹಾರವನ್ನು ವಿತರಿಸುವಂತೆ ಶಾಲೆಯ ಮುಖ್ಯಶಿಕ್ಷಕರಿಗೆ ಸೂಚಿಸಿದ್ದು ಈ ಸಂಬಂಧ ವೆಚ್ಚವನ್ನು **K2 PFMS** ಅಡಿಯಲ್ಲಿ ಭರಿಸಿ ಖರ್ಚು ವೆಚ್ಚುಗಳನ್ನು ನಿರ್ವಹಿಸುವಂತೆ ಸೂಚಿಸಿದೆ.

ಉಳಿದಂತೆ ರಾಜ್ಯದ 23 ಜಿಲ್ಲೆಗಳಲ್ಲಿ 1-8ನೇ ತರಗತಿಯ ಸರ್ಕಾರಿ ಮತ್ತು ಅನುದಾನಿತ ಶಾಲೆಗಳ ಫಲಾನುಭವಿ ಮಕ್ಕಳಿಗೆ ಮೇಲ್ಕಂಡಂತೆ ಶಾಲೆಯ ಮುಖ್ಯಶಿಕ್ಷಕರು ಹಿಂದಿನ ಸಾಲಿನ ಉಲ್ಲೇಖ-3 ರಲ್ಲಿ ನೀಡಿದ ಮಾರ್ಗಸೂಚಿಯಂತೆ ಎಸ್.ಡಿ.ಎಂ.ಸಿ ನೇತೃತ್ವದಲ್ಲಿ ಅಗತ್ಯ ಕ್ರಮ ಕೈಗೊಂಡು ಪೂರಕ ಪೌಷ್ಟಿಕ ಆಹಾರವನ್ನು ವಿತರಿಸುವಂತೆ ಈ ಮೂಲಕ ಸೂಚಿಸಿದೆ. ಈ ಸಂಬಂಧ ವೆಚ್ಚವನ್ನು **ಲೆಕ್ಕ ಶೀರ್ಷಿಕೆ 2202-00-101-0-18** ಅಡಿಯಲ್ಲಿ ಭರಿಸಿ ಖರ್ಚುವೆಚ್ಚಗಳನ್ನು ನಿರ್ವಹಿಸುವಂತೆ ಸೂಚಿಸಿದೆ.

ರಾಜ್ಯದಲ್ಲಿ 13 ಜಿಲ್ಲೆಗಳಲ್ಲಿ ಪಿ.ಎಂ.ಪೋಷಣ್ ಅಡಿಯಲ್ಲಿ ಜಿಲ್ಲಾ ಪಂಚಾಯತ್ ನೊಂದಿಗೆ MoU ಮಾಡಿಕೊಂಡು ಭಾಗವಹಿಸಿರುವ ಸರ್ಕಾರಿ ಮತ್ತು ಅನುದಾನಿತ ಶಾಲೆಗಳಿಗೆ ಸಿದ್ಧಪಡಿಸಿದ ಮಧ್ಯಾಹ್ನದ ಬಿಸಿಯೂಟ ವಿತರಿಸುತ್ತಿರುವ ಎಲ್ಲಾ ಸ್ವಯಂ ಸೇವಾ ಸಂಸ್ಥೆಗಳು (NGO) ಸಹ ಮೇಲ್ಕಂಡ ಉಲ್ಲೇಖಿತ ಮಾರ್ಗಸೂಚಿಯಂತೆ ಪೂರಕ ಪೌಷ್ಟಿಕ ಆಹಾರವನ್ನು ವಿತರಿಸುವ ಕ್ರಮ ವಹಿಸುವಂತೆ ಸೂಚಿಸಿದೆ. ಈ ಕುರಿತು ಸಂಬಂಧಿಸಿದ ಜಿಲ್ಲೆಗಳ ಜಿಲ್ಲಾ ಪಂಚಾಯತ್ ಶಿಕ್ಷಣಾಧಿಕಾರಿಗಳು - ಪಿ.ಎಂ.ಪೋಷಣ್ ಹಾಗೂ ತಾಲ್ಲೂಕು ಪಂಚಾಯತ್ ಸಹಾಯಕ ನಿರ್ದೇಶಕರು - ಪಿ.ಎಂ.ಪೋಷಣ್, ಕೂಡಲೇ ಅಗತ್ಯ ಕ್ರಮ ಕೈಗೊಂಡು ಕಾರ್ಯಕ್ರಮ ಯಶಸ್ವಿಗೊಳಿಸುವಂತೆ ಸೂಚಿಸಿದೆ.

20/6/2023

ಶುಭ ಕಲ್ಯಾಣ್ ಭಾ.ಆ.ಸೇ
ನಿರ್ದೇಶಕರು
ಪಿ.ಎಂ.ಪೋಷಣ್, ಶಾಲಾ ಶಿಕ್ಷಣ ಇಲಾಖೆ
ಬೆಂಗಳೂರು-1.

ಪ್ರತಿಯನ್ನು ಅಗತ್ಯ ಕ್ರಮಕ್ಕಾಗಿ

1. ರಾಜ್ಯದ ಎಲ್ಲಾ ಜಿಲ್ಲೆಗಳ ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕರು (ಆಡಳಿತ),
2. ರಾಜ್ಯದ ಎಲ್ಲಾ ಜಿಲ್ಲೆಗಳ ಜಿಲ್ಲಾ ಪಂಚಾಯತ್, ಶಿಕ್ಷಣಾಧಿಕಾರಿಗಳು- ಪಿ.ಎಂ.ಪೋಷಣ್
3. ರಾಜ್ಯದ ಎಲ್ಲಾ ತಾಲ್ಲೂಕುಗಳ ಶಾಲಾ ಶಿಕ್ಷಣ ಇಲಾಖೆಯ ಕ್ಷೇತ್ರ ಶಿಕ್ಷಣಾಧಿಕಾರಿಗಳು
4. ರಾಜ್ಯದ ಎಲ್ಲಾ ತಾಲ್ಲೂಕುಗಳ ತಾಲ್ಲೂಕು ಪಂಚಾಯತ್, ಸಹಾಯಕ ನಿರ್ದೇಶಕರು- ಪಿ.ಎಂ.ಪೋಷಣ್
5. ರಾಜ್ಯದ ಎಲ್ಲಾ ಸರ್ಕಾರಿ ಮತ್ತು ಅನುದಾನಿತ ಶಾಲೆಗಳ ಮುಖ್ಯಶಿಕ್ಷಕರ ಅಗತ್ಯ ಕ್ರಮಕ್ಕಾಗಿ,

ಪ್ರತಿಯನ್ನು ಮಾಹಿತಿಗಾಗಿ

1. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಬಹು ಮಹಡಿಗಳ ಕಟ್ಟಡ, ಡಾ. ಬಿ.ಆರ್ ಅಂಬೇಡ್ಕರ್ ವೀದಿ, ಬೆಂಗಳೂರು-560001 ಇವರಿಗೆ ಗೌರವ ಪೂರ್ವಕವಾಗಿ ಮಾಹಿತಿಗಾಗಿ ಸಲ್ಲಿಸಿದೆ.
2. ಅಧ್ಯಕ್ಷರು ಕರ್ನಾಟಕ ರಾಜ್ಯ ಆಹಾರ ಆಯೋಗ, ಕೆ.ಜಿ.ರಸ್ತೆ, ಬೆಂಗಳೂರು ಇವರ ಮಾಹಿತಿಗಾಗಿ ಸಲ್ಲಿಸಿದೆ
3. ಅಪರ ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ, ಕಲಬುರಗಿ ಮತ್ತು ಧಾರವಾಡ ವಿಭಾಗ ರವರ ಮಾಹಿತಿಗಾಗಿ ಸಲ್ಲಿಸಿದೆ
4. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತ್ ಗಳ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು ಇವರ ಮಾಹಿತಿಗಾಗಿ,
5. ರಾಜ್ಯದ ಎಲ್ಲಾ ತಾಲ್ಲೂಕು ಪಂಚಾಯತ್ ಗಳ ಕಾರ್ಯನಿರ್ವಾಹಕ ಅಧಿಕಾರಿಗಳ ಕ್ರಮಕ್ಕಾಗಿ,
6. ಕಛೇರಿ ಪ್ರತಿ ಎಂ 1